<u>**ಕರ್ನಾಟಕ ವಿಧಾನ ಪರಿಷತ್ತು**</u>

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 289
2. ಸದಸ್ಯರ ಹೆಸರು : ಡಾ|| ವೈ.ಎ. ನಾರಾಯಣಸ್ವಾಮಿ
3. ಉತ್ತರಿಸಬೇಕಾದ ದಿನಾಂಕ : 15.02.2024
4. ಉತ್ತರಿಸಬೇಕಾದ ಸಚಿವರು : ಮಾನ್ಯ ಉಪ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆಗಳು | ಉತ್ತರಗಳು |
|---|---|---|
| (ಅ) | ಕಾವೇರಿ ನದಿಗೆ ಅಡ್ಡಲಾಗಿ ಮೇಕೆದಾಟುವಿನ ಬಳಿ "Balancing Reservoir" ಅನ್ನು ಕಟ್ಟಲು ಸರ್ಕಾರ ಉದ್ಧೇಶಿಸಿದೆಯೇ; ಉದ್ಧೇಸಿದ್ದಲ್ಲಿ ಇದರ ವಿವರಗಳನ್ನು ನೀಡುವುದು; | • ಮೇಕೆದಾಟು ಸಮತೋಲನಾ ಜಲಾಶಯ ಹಾಗೂ ಕುಡಿಯುವ ನೀರಿನ ಯೋಜನೆಯ ರೂ.9000.00 ಕೋಟಿ ಮೊತ್ತದ ವಿವರವಾದ ಯೋಜನಾ ವರದಿಯನ್ನು ದಿನಾಂಕ:18.01.2019 ರಂದು ಕೇಂದ್ರ ಜಲ ಆಯೋಗಕ್ಕೆ ಅನುಮೋದನೆಗೆ ಸಲ್ಲಿಸಲಾಗಿದ್ದು, ಕೇಂದ್ರ ಜಲ ಆಯೋಗದ ವಿವಿಧ ನಿರ್ದೇಶನಾಲಯಗಳಲ್ಲಿ ಪರಿಶೀಲನೆಯಲ್ಲಿರುತ್ತದೆ.<br>• ಯೋಜನೆಗೆ ಅವಶ್ಯವಿರುವ Environmental Impact Assessment & Environmental Management Plan ವರದಿಗಳನ್ನು ತಯಾರಿಸಲು Terms of Reference ಅರ್ಜಿಯನ್ನು ಪರಿಸರ ಅರಣ್ಯ ಮತ್ತು ಹವಾಮಾನ ಬದಲಾವಣೆಯ ಸಚಿವಾಲಯಕ್ಕೆ (MoEF & CC) ಈ ಹಿಂದೆ ಸಲ್ಲಿಸಲಾದ ಅರ್ಜಿಯು Delist ಮಾಡಲಾಗಿದ್ದು, ಅರ್ಜಿಯನ್ನು ಮರುಸಲ್ಲಿಸಲು ಕ್ರಮ ವಹಿಸಲಾಗುತ್ತಿದೆ.<br>• ಯೋಜನೆಗೆ ಅವಶ್ಯವಿರುವ ಅರಣ್ಯ ಭೂಮಿಯ ಬದಲಾಗಿ ಅರಣ್ಯ ಇಲಾಖೇಗೆ ಹಸ್ತಾಂತರಿಸುವ compensatory afforestation land ಅನ್ನು ಮಂಡ್ಯ, ರಾಮನಗರ ಮತ್ತು ಚಾಮರಾಜನಗರ ಜಿಲ್ಲೆಗಳಲ್ಲಿ ಗುರುತಿಸಲಾಗಿದೆ.<br>• ಅಪರ ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು, FRL ಗಡಿರೇಖೆ ಗುರುತಿಸುವಿಕೆ ಮತ್ತು ಮರಗಳ ಏಣಿಕೆ ಕಾರ್ಯಗಳಿಗೆ ಅನುಮೋದನೆ ನೀಡಿದ್ದು, ಪ್ರಸ್ತುತ 355.00 ಕಿ.ಮೀ ನಷ್ಟು FRL ಗಡಿರೇಖೆ ಗುರುತಿಸುವಿಕೆ ಕಾಮಗಾರಿ ಪೂರ್ಣಗೊಂಡಿದ್ದು, ಉಳಿಕೆ ಕಾಮಗಾರಿ ಪ್ರಗತಿಯಲ್ಲಿದೆ.<br>• ಸದರಿ ಯೋಜನೆಗೆ ಇರುವ ಕಾನೂನಾತ್ಮಕ ಹಾಗೂ ಆಡಳಿತಾತ್ಮಕ ತೊಡಕುಗಳನ್ನು ನಿವಾರಿಸಿಕೊಂಡು ಸಕ್ಷಮ ಪ್ರಾಧಿಕಾರಗಳ ತೀರುವಳಿಗಳೊಂದಿಗೆ ಯೋಜನೆಯನ್ನು ಅನುಷ್ಠಾನಗೊಳಿಸಲು ಅಗತ್ಯ ಕ್ರಮಗಳನ್ನು ವಹಿಸಲಾಗುತ್ತಿದೆ. |
| (ಆ) | ಈ ಯೋಜನೆಗೆ ಕೇಂದ್ರ ಮತ್ತು ರಾಜ್ಯ ಸರ್ಕಾರದಿಂದ ಬೇಕಾಗಿರುವ ಎಲ್ಲಾ ಅನುಮತಿಗಳನ್ನು ಪಡೆಯಲಾಗಿದೆಯೇ; | |
| (ಇ) | ಅತ್ಯಂತ ಸೂಕ್ತವಾಗಿರುವ ಈ ಯೋಜನೆಯ ಕಾಮಗಾರಿಗಳನ್ನು ಎಂದಿನಿಂದ ಪ್ರಾರಂಭಿಸಲಾಗುವುದು? | |

*ಸಂಖ್ಯೆ: ಜಸಂಇ **07** ಎನ್‌ಎಲ್‌ಎ **2024***

**( ಡಿ. ಕೆ. ಶಿವಕುಮಾರ್ )**

ಉಪ ಮುಖ್ಯಮಂತ್ರಿಗಳು